**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–36)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2009ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2009 (2009ರ ಕರ್ನಾಟಕ ಅಧಿನಿಯಮ ಸಂಖ್ಯೆ 10)ನ್ನು, ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2009 (2009ರ ಕರ್ನಾಟಕ ಅಧಿನಿಯಮ ಸಂಖ್ಯೆ 10)ರ, 3ನೇ ಪ್ರಕರಣದ (4)ನೇ ಉಪಪ್ರಕರಣದಲ್ಲಿರುವ (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು ".

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2009 (2009ರ ಕರ್ನಾಟಕ ಅಧಿನಿಯಮ ಸಂಖ್ಯೆ 10)ನ್ನು, ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ,

## **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಕೃಷ್ಣ ಭೈರೇಗೌಡ**
ಕಂದಾಯ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

## ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2009ರ

## (2009ರ ಕರ್ನಾಟಕ ಅಧಿನಿಯಮ ಸಂಖ್ಯೆ 10) ಉದ್ಧೃತ ಭಾಗ

**XXX XXX XXX**

**3. ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೇ, ಈ ಅಧಿನಿಯಮದ ಉದ್ದೇಶಗಳಿಗಾಗಿ, `ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ' ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ಸ್ಥಾಪಿಸತಕ್ಕದ್ದು.

(2) ಪ್ರಾಧಿಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ಸ್ಥಳದಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಹಾಗೂ ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಪ್ರಾಧಿಕಾರವು, ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯಮಂತ್ರಿಗಳು, ಇವರು ಪ್ರಾಧಿಕಾರದ ಸಲಹಾ ಸಮಿತಿಯ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು;

(ಬಿ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು;

(ಸಿ) ಕಂದಾಯ ಇಲಾಖೆಯ ಸಚಿವರು;

(ಡಿ) ಆರ್ಥಿಕ ಇಲಾಖೆಯ ಸಚಿವರು;

(ಇ) ಹಾವೇರಿ ಜಿಲ್ಲೆಯ ಉಸ್ತುವಾರಿ ಸಚಿವರು;

(ಎಫ್) ಕಾಗಿನೆಲೆ ಹಾಗೂ ಬಾಡ ಗ್ರಾಮಗಳ ಕ್ಷೇತ್ರವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಹಾಗೂ ಅದರ ಎಲ್ಲೆಗಳೊಳಗೆ ತಮ್ಮ ಚುನಾವಣಾ ಕ್ಷೇತ್ರವನ್ನು ಹೊಂದಿರುವ ಸಂಸತ್ ಸದಸ್ಯರು ಮತ್ತು ರಾಜ್ಯ ವಿಧಾನಮಂಡಲದ ಸದಸ್ಯರು;

(ಜಿ) ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾವೇರಿ; ಸದಸ್ಯರು

(ಎಚ್) ಸಂತ ಕವಿ ಕನಕದಾಸರು ಅಂಗೀಕರಿಸಿ ಸಾರಿದ ತತ್ವಗಳ ಅನುಷ್ಠಾನಕ್ಕಾಗಿ ದುಡಿದಂಥ, ರಾಜ್ಯಸರ್ಕಾರವು ನಾಮನಿರ್ದೇಶಿಸಿದ ಐವರಿಗೆ ಮೀರದ ಸದಸ್ಯರು, ಅವರುಗಳಲ್ಲಿ ಒಬ್ಬರು ದೇವಾಲಯ ವಾಸ್ತುಶಿಲ್ಪದ ಜ್ಞಾನ ಮತ್ತು ಹತ್ತು ವರ್ಷಗಳಿಗಿಂತ ಕಡಿಮೆಯಲ್ಲದ ಕೆಲಸದ ಅನುಭವ ಹೊಂದಿರುವ ಸಿವಿಲ್ ಇಂಜಿನಿಯರ್ ಅಥವಾ ವಾಸ್ತುಶಿಲ್ಪಿಯಾಗಿರತಕ್ಕದ್ದು;

(ಐ) ಸರ್ಕಾರದ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ;

(ಜೆ) ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ;

(ಕೆ) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ;

(ಎಲ್) ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ;

(ಎಮ್) ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ; ಸದಸ್ಯರು

(ಎನ್) ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ವಸ್ತು ಸಂಗ್ರಹಾಲಯ ಇಲಾಖೆ; ಸದಸ್ಯರು

(ಒ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೆರೆ ಅಭಿವೃದ್ಧಿ ಪ್ರಾಧಿಕಾರ; ಸದಸ್ಯರು

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 12ನೇ ಆಗಸ್ಟ್ 2025